493 (528) ಶ್ರೀ ಕುಮಾರ್ ಬಂಗಾರಪ್ಪ. ಎಸ್ (ಸೊರಬ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸೊರಬ ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ರಸ್ತೆ ವ್ಯಾಪ್ತಿಯಲ್ಲಿ ಬರುವ ಹೊಸ ಸೇತುವೆಗಳನ್ನು ನಿರ್ಮಿಸಲು ಪ್ರಸ್ತಾವನೆ ಸರಕಾರದ ಗಮನಕ್ಕೆ ಬಂದಿದೆಯೇ:

ಆ) ಬಂದಿದ್ದಲ್ಲಿ, ಅವುಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು);

ಇ) ಈ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

ಈ) ಸೊರಬ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕೆರೆಯ ಏರಿಯ ಮೇಲಿರುವ ಡಾಂಬರೀಕರಣಗೊಂಡ ಜಿಲ್ಲಾ ಪಂಚಾಯತ್ ರಸ್ತೆಗಳ ಅಗಲೀಕರಣ ಕಾಮಗಾರಿಗಳನ್ನು ಯಾವ ಅನುದಾನದಲ್ಲಿ ಕೈಗೊಳ್ಳಲು ಸರಕಾರ ಕ್ರಮ ಕೈಗೊಂಡಿದೆ;

ಉ) ಕಾಮಗಾರಿಗಳ ಅಂದಾಜು ವೆಚ್ಚವೆಷ್ಟು (ಕಾಮಗಾರಿವಾರು ಪಟ್ಟಿಯನ್ನು ನೀಡುವುದು)?

ಶ್ರೀ ಕುಮಾರ್ ಬಂಗಾರಪ್ಪ ಎಸ್. (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಬೆಣ್ಣೆಗೆರೆಯಿಂದ ಕಚವಿ ಮಾರ್ಗವಾಗಿ ನಾಗರಹಳ್ಳಕ್ಕೆ ಅಡ್ಡಲಾಗಿ ಸೇತುವೆ ನಿರ್ಮಾಣ.

ಸದರಿ ಕಾಮಗಾರಿಯ ಸೇತುವೆಯ ಉದ್ದ 9.00 ಮೀ. ಅಗಲ 5.5. ಮೀ. ಈ ಕಾಮಗಾರಿಯನ್ನು ಪೂರ್ಣಗೊಳಿಸಲು ರೂ. 7.00 ಲಕ್ಷ ಅಂದಾಜು ಮೊತ್ತವಾಗುತ್ತದೆ.

ಇ) ಅನುದಾನ ಲಭ್ಯತೆಗನುಗುಣವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಈ) 3054 ಹಾಗೂ 5054 ರ ಲೆಕ್ಕಶೀರ್ಷಿಕೆಯಡಿ ಲಭ್ಯವಿರುವ ಅನುದಾನದಲ್ಲಿ ಜಿಲ್ಲಾ ಪಂಚಾಯತಿಯಿಂದ ಅಥವಾ ಶಾಸಕರ ಕ್ಷೇತ್ರಾಭಿವೃದ್ಧಿ ನಿಧಿಯಿಂದ ಕೂಡ ಅಗಲೀಕರಣ ಕೆಲಸವನ್ನು ಕೈಗೊಳ್ಳಬಹುದು.

ಉ) ಉದ್ಭವಿಸುವುದಿಲ್ಲ.

494 (529) ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸೊರಬ ತಾಲ್ಲೂಕಿನ ಆನವಟ್ಟಿಗೆ ಮಂಜೂರಾದ ಪದವಿ ಕಾಲೇಜಿಗೆ ಯಾವಾಗ ಕಟ್ಟಡ ನಿರ್ಮಿಸಲಾಗುವುದು;

ಆ) ಅಗತ್ಯ ಸಿಬ್ಬಂದಿ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):

ಅ) ಆನವಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸೊರಬ ತಾಲ್ಲೂಕಿನ ಆನವಟ್ಟಿ ಗ್ರಾಮದ ಸರ್ವೆ ನಂ. 10ರಲ್ಲಿ 4 ಎಕರೆ ಜಮೀನನ್ನು ಮಂಜೂರು ಮಾಡಲಾಗಿದ್ದು, ಈ ಜಮೀನನ್ನು ಮಂಜೂರು ಮಾಡುವಾಗ ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಜಮೀನನ್ನು ವರ್ಗಾಯಿಸಲು ಷರತ್ತು ವಿಧಿಸಲಾಗಿತ್ತು. ಈ ಬಗ್ಗೆ ಕಂದಾಯ ಇಲಾಖೆಯಿಂದ ಕ್ರಮ ಕೈಗೊಂಡು ಜಮೀನನ್ನು ಈ ಇಲಾಖೆಯ ವಶಕ್ಕೆ ನೀಡಿದ ಕೂಡಲೇ ಕಟ್ಟಡ ನಿರ್ಮಾಣದ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಆ) ಹೌದು, ಸದ್ರಿ ಕಾಲೇಜಿಗೆ ಉಪನ್ಯಾಸಕರ ವಿವಿಧ ವಿಷಯಗಳಲ್ಲಿ ಒಟ್ಟು 05 ಹುದ್ದೆಗಳು ಮಂಜೂರಾಗಿದ್ದು, ಹಾಲಿ 4 ಹುದ್ದೆಗಳಲ್ಲಿ 04 ಮಂದಿ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ. ಇಂಗ್ಲೀಷ್ ಉಪನ್ಯಾಸಕರ ಹುದ್ದೆ ಖಾಲಿ ಇದ್ದು 08 ಗಂಟೆಗಳ ಅರೆಕಾಲಿಕ ಕಾರ್ಯಭಾರವಿರುವುದರಿಂದ ಪೂರ್ಣಕಾಲಿಕ ಉಪನ್ಯಾಸಕರ ಹುದ್ದೆಯನ್ನು ತುಂಬಲು ಕ್ರಮ ಕೈಗೊಳ್ಳಲಾಗಿಲ್ಲ. ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ, ಮಂಜೂರಾಗಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಹುದ್ದೆಗಳ ಬಗ್ಗೆ ವಿವರಗಳು ಈ ಕೆಳಕಂಡಂತೆ ಇದೆ.

ವೃಂದಗಳು	ಮಂಜೂರಾದ ಹುದ್ದೆಗಳ ಸಂಖ್ಯೆ	ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ	ಖಾಲಿ ಹುದ್ದೆಗಳ ಸಂಖ್ಯೆ
ಪ್ರಥಮದರ್ಜೆ ಸಹಾಯಕರು		1	1 –
ದ್ವಿತೀಯದರ್ಜೆ ಸಹಾಯಕರು		1	1 –
ಬೆರಳಚ್ಚುಗಾರರು	1	1	–
ಗ್ರಂಥಾಲಯ ಸಹಾಯಕರು		1	– 1
ಅಟೆಂಡರ್	3	2	1
ಪರಿಚಾರಕರು	1	1	–

496 (677) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ವಿಶ್ವವಿದ್ಯಾಲಯವು ಯಾವ ಸಾಲಿನಿಂದ ಪ್ರಾರಂಭವಾಗಿದೆ;

ಆ) ಉದ್ಘಾಟನಾ ಕಾರ್ಯಕ್ರಮ ಯಾವಾಗ ನಡೆಯಿತು;

ಇ) ಈ ವಿಶ್ವವಿದ್ಯಾಲಯದ ಅಭಿವೃದ್ಧಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳೇನಾದರೂ ಇದೆಯೇ;

ಈ) ಈ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಸರ್ಕಾರವು ಕಾಲಮಿತಿಯನ್ನು ಹಾಕಿಕೊಂಡಿದೆಯೇ?